# ಕನ್ನಡ ವಿಶ್ವವಿದ್ಯಾಲಯ, ಹಂಪಿ
# ರಾಷ್ಟ್ರೀಯ ಸೇವಾ ಯೋಜನೆ ಘಟಕ
# ಮಹಾತ್ಮ ಗಾಂಧೀಜಿ ಜಯಂತಿ

## ಗಾಂಧಿ ಮತ್ತು ಶಾಸ್ತ್ರಿ ಭಾರತದ ಧ್ರುವ ನಕ್ಷತ್ರಗಳು – ಡಾ. ಡಿ.ವಿ. ಪರಮಶಿವಮೂರ್ತಿ

ಮಾನ್ಯ ಕುಲಪತಿಗಳು

ಮಹಾನ್ ಚೇತನ ಹಾಗೂ ಉತ್ತಮ ನಾಯಕರಾಗಿ ಭಾರತದ ಸ್ವಾತಂತ್ರ್ಯ ಹೋರಾಟದಲ್ಲಿ ಭಾಗವಹಿಸಿ ಧ್ರುವ ನಕ್ಷತ್ರದಂತೆ ಗಾಂಧೀಜಿ ಮತ್ತು ಲಾಲ್ ಬಹದ್ದೂರ್‌ಶಾಸ್ತ್ರಿ ಇಬ್ಬರೂ ಮಹನೀಯರು ಹೋರಾಡಿ ಮಡಿದವರು ಎಂದು ಕನ್ನಡ ವಿಶ್ವವಿದ್ಯಾಲಯದ ಮಾನ್ಯ ಕುಲಪತಿಗಳಾದ **ಡಾ. ಡಿ.ವಿ. ಪರಮಶಿವಮೂರ್ತಿ** ಅವರು ಅಭಿಪ್ರಾಯ ವ್ಯಕ್ತಪಡಿಸಿದರು.

ಕನ್ನಡ ವಿಶ್ವವಿದ್ಯಾಲಯದ ಸಿಂಡಿಕೇಟ್ ಸಭಾಂಗಣದಲ್ಲಿ ದಿನಾಂಕ 2.10.2024ರಂದು **ರಾಷ್ಟ್ರೀಯ ಸೇವಾ ಯೋಜನೆ ಘಟಕ**ದಿಂದ **ಮಹಾತ್ಮ ಗಾಂಧೀಜಿ ಜಯಂತಿ**ಯನ್ನು ಹಮ್ಮಿಕೊಳ್ಳಲಾಗಿತ್ತು. ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ ಕನ್ನಡ ವಿಶ್ವವಿದ್ಯಾಲಯದ ಮಾನ್ಯ ಕುಲಪತಿಗಳಾದ **ಡಾ. ಡಿ.ವಿ ಪರಮಶಿವಮೂರ್ತಿ** ಅವರು ಮಾತನಾಡುತ್ತಾ, ಕಾಲಕ್ರಮೇಣ ನಾವು ಅದರ್ಶ ವ್ಯಕ್ತಿಗಳನ್ನು ಮರೆಯುತ್ತಾ ಬಂದಿದ್ದೇವೆ. ಗಾಂಧೀಜಿ ಅವರ ಸರಳ ಹಾಗೂ ಮಾದರಿ ಜೀವನವನ್ನು ರೂಢಿಸಿಕೊಳ್ಳಬೇಕು. ನಮ್ಮಲ್ಲಿ ಬಡತನ ಭ್ರಷ್ಟಾಚಾರ ಅತಿಯಾಗಿದೆ. ಇತ್ತೀಚಿನ ದಿನಗಳಲ್ಲಿ ಹಿಂಸಾಚಾರವೆಂಬುದು ಮಾನವ ಕುಲವೇ ನಲುಗುವಂತೆ ಮಾಡುತ್ತಿದೆ. ಇಂದು ನಾವು ಸ್ವಾರ್ಥ ಸಾಧನೆಯಲ್ಲಿ ಬದುಕುತ್ತಿದ್ದೇವೆ. ನಾವು ಇನ್ನೊಬ್ಬರ ಜೀವನದಲ್ಲಿ ಕಂಠಕವಾಗಿ ಬದುಕಬಾರದು ಎಂದರು. ಗಾಂಧೀಜಿಯವರ ಆತ್ಮಶಕ್ತಿ ಮತ್ತು ದೇಶದ ಯುವ ಶಕ್ತಿಯೊಂದಿಗೆ ರಾಮ ರಾಜ್ಯದ ಕನಸು ನನಸಾಗಲಿ ಎಂದು ಹೇಳಿದರು.

ಕನ್ನಡ ವಿಶ್ವವಿದ್ಯಾಲಯದ ಆವರಣದಲ್ಲಿ ಸ್ವಚ್ಛ ಭಾರತ ಅಭಿಯಾನ ಕಾರ್ಯಕ್ರಮದಲ್ಲಿ ಪ್ರಯುಕ್ತ ಮಾನ್ಯ ಕುಲಪತಿಗಳಾದ **ಡಾ.ಡಿ.ವಿ. ಪರಮಶಿವಮೂರ್ತಿ** ಅವರು ಹಾಗೂ ಬೋಧಕ ಮತ್ತು ಬೋಧಕೇತರ ಸಿಬ್ಬಂದಿಗಳು ಮತ್ತು ವಿದ್ಯಾರ್ಥಿಗಳು ಸ್ವಚ್ಛತಾ ಅಭಿಯಾನದಲ್ಲಿ ಆವರಣದಲ್ಲಿನ ಪ್ಲಾಸ್ಟಿಕ್ ಮುಕ್ತಗೊಳಿಸಲು ಪಾಲ್ಗೊಂಡಿದ್ದರು.

ಕಾರ್ಯಕ್ರಮದಲ್ಲಿ ಡೀನರಾದ ಡಾ. ಎಫ್.ಟಿ.ಹಳ್ಳಿಕೇರಿ, ಡಾ. ಚಲುವರಾಜು, ಡಾ. ಶೈಲಜ ಇಂ. ಹಿರೇಮಠ ಅಧ್ಯಯನಾಂಗದ ನಿರ್ದೇಶಕರಾದ ಡಾ. ಅಮರೇಶ್ ಯತಗಲ್, ಎನ್‌ಎಸ್‌ಎಸ್ ಘಟಕದ ಸಂಯೋಜನಾಧಿಕಾರಿಗಳಾದ ಡಾ.ಎ.ಶ್ರೀಧರ್, ಉಪಕುಲಸಚಿವರಾದ ಡಾ.ಎ.ವೆಂಕಟೇಶ, ಆಡಳಿತ ಅಧಿಕಾರಿಗಳು, ವಿವಿಧ ವಿಭಾಗಗಳ ಮುಖ್ಯಸ್ಥರು, ಪ್ರಾಧ್ಯಾಪಕರು, ಸಂಶೋಧನಾ ವಿದ್ಯಾರ್ಥಿಗಳು ಹಾಗೂ ಸಿಬ್ಬಂದಿಗಳು ಉಪಸ್ಥಿತರಿದ್ದರು.




ಮಹಾತ್ಮ ಗಾಂಧೀಜಿ ಜಯಂತಿ ಕುರಿತು ಮಾನ್ಯ ಕುಲಪತಿಗಳಾದ ಡಾ.ಡಿ.ವಿ.ಪರಮಶಿವಮೂರ್ತಿ ಅವರು ಅಧ್ಯಕ್ಷತೆ ವಹಿಸಿ ಮಾತನಾಡಿದರು.




ಸ್ವಚ್ಛ ಭಾರತ ಅಭಿಯಾನ ಕಾರ್ಯಕ್ರಮದಲ್ಲಿ ಪ್ರಯುಕ್ತ ಮಾನ್ಯ ಕುಲಪತಿಗಳಾದ ಡಾ.ಡಿ.ವಿ. ಪರಮಶಿವಮೂರ್ತಿ ಅವರು ಹಾಗೂ ಬೋಧಕ ಮತ್ತು ಬೋಧಕೇತರ ಸಿಬ್ಬಂದಿಗಳು ಮತ್ತು ವಿದ್ಯಾರ್ಥಿಗಳು ಸ್ವಚ್ಛತಾ ಅಭಿಯಾನದಲ್ಲಿ ಆವರಣದಲ್ಲಿನ ಪ್ಲಾಸ್ಟಿಕ್ ಮುಕ್ತಗೊಳಿಸಲು ಪಾಲ್ಗೊಂಡಿದ್ದರು.